4

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 22/7/2018

# ಶಾಸಕರ ವಿರುದ್ಧ ಎಫ್‌ಐಆರ್

■ **ವಿಕ ಸುದ್ದಿಲೋಕ** ತುಮಕೂರು ಗ್ರಾಮಾಂತರ

22/7

ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ತುಮಕೂರು ಗ್ರಾಮಾಂತರ ಶಾಸಕ ಡಿ.ಸಿ. ಗೌರಿಶಂಕರ್ ಅವರು ಸರಕಾರಿ ಶಾಲೆಯ ಮಕ್ಕಳಿಗೆ ನಕಲಿ ಪಾಲಿಸಿ ವಿಮೆಯ ಬಾಂಡ್ ವಿತರಿಸಿದ್ದಾರೆ ಎಂಬ ಆರೋಪದ ಮೇಲೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಅವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಕಳೆದ 2018ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಪೋಷಕರ ಮತಗಳನ್ನು ಪಡೆಯುವ ಉದ್ದೇಶದಿಂದ ಸರಕಾರಿ ಶಾಲಾ ಮಕ್ಕಳಿಗೆ ವಿಮಾ ಪಾಲಿಸಿಯ ನಕಲಿ ಬಾಂಡುಗಳನ್ನು ವಿತರಿಸಲಾಗಿದೆ ಎಂದು ರಮೇಶ್ ಬೆಟ್ಟಯ್ಯ ಆರೋಪಿಸಿದ್ದರು. ಅಲ್ಲದೆ, ಈ ಸಂಬಂಧ ತನಿಖೆ ನಡೆಸುವಂತೆ ಮುಖ್ಯ ಚುನಾವಣಾ ಅಧಿಕಾರಿ, ಮುಖ್ಯಮಂತ್ರಿ, ಪ್ರಧಾನ ಮಂತ್ರಿ ಕಾರ್ಯಾಲಯಕ್ಕೆ ಪತ್ರ ಬರೆದಿದ್ದರು. ತನಿಖೆ ನಡೆಸುವಂತೆ ಪ್ರಧಾನಮಂತ್ರಿ ಕಾರ್ಯಾಲಯದಿಂದ ರಾಜ್ಯ ಸರಕಾರಕ್ಕೆ ಶಿಫಾರಸು ಮಾಡಲಾಗಿದೆ ತಿಳಿದು ಬಂದಿದೆ.

ಈ ಆರೋಪದ ಅಡಿಯಲ್ಲಿ ತುಮಕೂರು ಗ್ರಾಮಾಂತರದ ಪೊಲೀಸ್ ಠಾಣೆಯಲ್ಲಿ ಐಆರ್‌ಡಿಎಐ ಕಾಯ್ದೆಯಡಿ ಶಾಸಕ ಡಿ.ಸಿ. ಗೌರಿಶಂಕರ್, ದಿ.ನ್ಯೂ ಇಂಡಿಯಾ ಇನ್ಸೂರೆನ್ಸ್ ಕಂಪನಿಯ ವ್ಯವಸ್ಥಾಪಕ ಮತ್ತು ಅಧಿಕಾರಿಗಳು ಸೇರಿದಂತೆ, ಕಮ್ಮಗೊಂಡನಹಳ್ಳಿ ಮಾರುತಿ ಸೇವಾ ಸಮಿತಿ ಸಂಸ್ಥೆ ಮತ್ತು ಪದಾಧಿಕಾರಿಗಳು, ಒನ್ ರೂಪಿ ಚಾರಿಟೆಬಲ್ ಟ್ರಸ್ಟ್‌ನ ಪದಾಧಿಕಾರಿ ಹಾಗೂ ಅಸಿಸ್ಟೆನ್ಸ್ ಕಂಪನಿ ಅಧಿಕಾರಿಗಳ ಮೇಲೆ ಪ್ರಕರಣ ದಾಖಲಾಗಿದೆ.